ದಿನಾಂಕಃ 29-12-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ,

3) ಆರೋಪಿ ಮತ್ತು ನನ್ನ ಸಹೋದರ ಪ್ರಸನ್ನ್ ಕುಮಾರ ರವರ ನಡುವೆ ಆಗಿರುವ ಕರಾರು ಅನುಷ್ಟಾನಗೊಂಡಿಲ್ಲ ಎಂದರೆ ನನಗೆ ಗೊತ್ತಿಲ್ಲ. ಆರೋಪಿ ಪ್ರಸನ್ನ್ ಕುಮಾರ ರವರಿಗೆ ಸಹಿ ಮಾಡಿದ ಖಾಲಿ ಚೆಕ್ಕು ನೀಡಿದ್ದು, ಸದರಿ ಚೆಕ್ಕನ್ನು ನಾನು ದುರುಪಯೋಗ ಪಡೆಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಆರೋಪಿಗೆ ನಗದು ರೂಪದಲ್ಲಿ ಹಣವನ್ನು ಪಾವತಿ ಮಾಡಿರುತ್ತೇನೆ. ಸದರಿ ಹಣವನ್ನು ನಾನು ಬಡಿಗಿ ಕೆಲಸ ಮಾಡಿದ್ದು ಅದರಿಂದ ಬಂದ ಆದಾಯದ ಹಣವನ್ನು ಆರೋಪಿಗೆ ನೀಡಿರುತ್ತೇನೆ. ನಾನು ಆರೋಪಿಗೆ ಹಣ ನೀಡಿದಾಗ ಆರೋಪಿಯ ತಂದೆ ಇದ್ದರು.

4) ನಾನು ಸ್ವಂತ ವ್ಯವಹಾರಕ್ಕಾಗಿ ಬ್ಯಾಂಕಿನಿಂದ ಸಾಲವನ್ನು ಪಡೆದುಕೊಂಡಿರುತ್ತೇನೆ. ಆರೋಪಿ ನನ್ನ ಬಳಿ ಸಾಲವನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಸಾಲದ ಭದ್ರತೆಗಾಗಿ ನನಗೆ ಚೆಕ್ಕು ನೀಡಿರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ